ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ        ದಿನಾಂಕ : DATE : 12/12/2019

# ಆರೈಕೆ ಹೊಣೆ ಮಕ್ಕಳ ಕಲ್ಯಾಣ ಸಮಿತಿಯದ್ದು

ಉದಯವಾಣಿ 12/12/19

## ಹೈಕೋರ್ಟ್‌ಗೆ ರಾಜ್ಯ ಸರ್ಕಾರದಿಂದ ಪ್ರಮಾಣಪತ್ರ ಸಲ್ಲಿಕೆ । ಇಂದು ವಿಚಾರಣೆ

ಬೆಂಗಳೂರು: ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿ ಬಂಧನಕ್ಕೆ ಒಳಗಾದ ವಿದೇಶಿಯರಿಗೆ ಜನಿಸಿದ ಮಕ್ಕಳಿಗೆ ಆಶ್ರಯ ಕಲ್ಪಿಸಲು ಯಾವುದೇ ವಿಶೇಷ ಸಂರಕ್ಷಣಾ ಕೇಂದ್ರಗಳನ್ನು ಸ್ಥಾಪನೆ ಮಾಡಿಲ್ಲ, ಆದರೆ, ಅಂತಹ ಮಕ್ಕಳಿಗೆ ಆಶ್ರಯ, ಆಹಾರ, ಉಡುಪು, ಶಿಕ್ಷಣ, ಮನರಂಜನೆ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಒದಗಿಸುವ ಸಂಪೂರ್ಣ ಜವಾಬ್ದಾರಿ ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಇಲಾಖೆಯ ಅಧೀನದ ಮಕ್ಕಳ ಕಲ್ಯಾಣ ಸಮಿತಿಗಳು ಹೊಂದಿವೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ.

ರಾಜ್ಯದಲ್ಲಿ ಅಕ್ರಮ ವಾಸ ಮಾಡಿದ ಆರೋಪದ ಮೇಲೆ ಬಂಧನಕ್ಕೆ ಒಳಗಾಗಿರುವ ಬಾಂಗ್ಲಾ ದೇಶದ ನಿವಾಸಿಗಳು ಎನ್ನಲಾದ ಬಾಬುಲ್ ಖಾನ್ ಹಾಗೂ ಮಹಮ್ಮದ್ ಆರೀಫ್ ಸೇರಿ ಮತ್ತಿತರರು ಸಲ್ಲಿಸಿರುವ ಜಾಮೀನು ಅರ್ಜಿಯ ವಿಚಾರಣೆಯನ್ನು ನ್ಯಾ.ಕೆ.ಎಸ್. ಫಣೀಂದ್ರ ನೇತೃತ್ವದ ನ್ಯಾಯಪೀಠ ಬುಧವಾರ ನಡೆಸಿತು.

ಅಕ್ರಮ ವಾಸದ ಆರೋಪದ ಮೇಲೆ ವಿದೇಶಿಯರು ಬಂಧನಕ್ಕೆ ಒಳಗಾದರೆ ಅವರ ಅಪ್ರಾಪ್ತ ಮಕ್ಕಳಿಗೆ ಸೂಕ್ತ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ಇರುವ ನಿಯಮ ಹಾಗೂ ವ್ಯವಸ್ಥೆಯ ಕುರಿತು ಮಾಹಿತಿ ನೀಡುವಂತೆ ಈ ಹಿಂದೆ ನಡೆಸಿದ ವಿಚಾರಣೆ ವೇಳೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿತ್ತು.

ಅದರಂತೆ, ಬುಧವಾರ ಅರ್ಜಿ ವಿಚಾರಣೆಗೆ ಬಂದಾಗ, ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಗೃಹ ಇಲಾಖೆ ಅಧೀನ ಕಾರ್ಯದರ್ಶಿ ಮತ್ತು ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಇಲಾಖೆ ನೀಡಿದ ಮಾಹಿತಿ ಒಳಗೊಂಡ ಪ್ರಮಾಣಪತ್ರವನ್ನು ಹೆಚ್ಚುವರಿ ಅಡ್ವೋಕೇಟ್ ಜನರಲ್ ಪ್ರಸನ್ನದೇಶಪಾಂಡೆಯವರು ನ್ಯಾಯಪೀಠಕ್ಕೆ ಸಲ್ಲಿಸಿದರು. ಅಲ್ಲದೆ, ಗೃಹ ಇಲಾಖೆ ಅಧೀನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯೊಂದಿಗೆ ನಡೆಸಿದ ಪತ್ರ ವ್ಯವಹಾರ ಮತ್ತು ರಾಜ್ಯ ಬಾಲಮಂದಿರದಲ್ಲಿರುವ ವಿದೇಶಿ ಪ್ರಜೆಗಳ ಮಕ್ಕಳ ಪಟ್ಟಿಯನ್ನು ನ್ಯಾಯಪೀಠಕ್ಕೆ ಸಲ್ಲಿಸಿದರು. ಈ ಪ್ರಮಾಣಪತ್ರ ದಾಖಲಿಸಿಕೊಂಡ ನ್ಯಾಯಪೀಠ, ವಿಚಾರಣೆಯನ್ನು ಗುರುವಾರಕ್ಕೆ ಮುಂದೂಡಿತು.

### ಪ್ರಮಾಣಪತ್ರದಲ್ಲಿ ಏನಿದೆ?

ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿದ ಆರೋಪದ ಮೇಲೆ ವಿದೇಶಿಯರು ಬಂಧನಕ್ಕೆ ಒಳಗಾದರೆ, ಅವರ ಅಪ್ರಾಪ್ತ ಮಕ್ಕಳಿಗೆ (ಯಾವುದೇ ಅಪರಾಧ ಕೃತ್ಯದಲ್ಲಿ ಸಿಲುಕದಿದ್ದರೆ) ಆಶ್ರಯ ಕಲ್ಪಿಸಲು ಯಾವುದೇ ವಿಶೇಷ ಸಂರಕ್ಷಣಾ ಕೇಂದ್ರಗಳನ್ನು ರಾಜ್ಯ ಸರ್ಕಾರ ಸ್ಥಾಪನೆ ಮಾಡಿಲ್ಲ, ಆದರೆ, ಬಂಧಿತ ವಿದೇಶಿಯರ ಮಕ್ಕಳಿಗೆ ಆಶ್ರಯ, ಆಹಾರ, ಉಡುಪು, ಶಿಕ್ಷಣ, ಮನರಂಜನೆ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಒದಗಿಸುವ ಸಂಪೂರ್ಣ ಜವಾಬ್ದಾರಿಯನ್ನು ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಇಲಾಖೆಯ ಅಧೀನದ ಮಕ್ಕಳ ಕಲ್ಯಾಣ ಸಮಿತಿಗಳು ಹೊಂದಿವೆ. ರಾಜ್ಯಾದ್ಯಂತ 33ಕ್ಕೂ ಅಧಿಕ ಮಕ್ಕಳ ಕಲ್ಯಾಣ ಸಮಿತಿ ಸ್ಥಾಪಿಸಲಾಗಿದೆ. ಆ ಮಕ್ಕಳನ್ನು ತಾಯ್ನಾಡಿಗೆ ಕಳುಹಿಸುವ ಮೇಲ್ವಿಚಾರಣೆಯನ್ನೂ ಸಮಿತಿಗಳು ವಹಿಸಲಿವೆ. ಅಲ್ಲದೆ, ಕೇಂದ್ರ ಸರ್ಕಾರ ರೂಪಿಸಿರುವ 'ಮಾದರಿ ವಿದೇಶಿಯರ ಬಂಧನ (ಡಿಟೆನ್ಷನ್ ಸೆಂಟರ್) ಕೇಂದ್ರ ಕೈಪಿಡಿ-2019'ರ ಪ್ರಕಾರ, ಅಕ್ರಮ ವಾಸದ ಮೇಲೆ ಬಂಧನಕ್ಕೊಳಗಾದ ವಿದೇಶಿ ಪ್ರಜೆಗಳ ಅಪ್ರಾಪ್ತ ಮಕ್ಕಳನ್ನು ಸ್ಥಳೀಯ ಶಾಲೆಗಳಿಗೆ ಸೇರಿಸಲು ಅವಕಾಶ ಕಲ್ಪಿಸಲಾಗಿದೆ. ಆ ನಿಯಮವನ್ನು ರಾಜ್ಯ ಸರ್ಕಾರ ಕಟ್ಟುನಿಟ್ಟಾಗಿ ಪಾಲಿಸಲಿದೆ ಎಂದು ಪ್ರಮಾಣಪತ್ರದಲ್ಲಿ ತಿಳಿಸಲಾಗಿದೆ.